# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ದಕ್ಷಿಣಕನ್ನಡ ಜಿಲ್ಲೆ ಬಂಟ್ವಾಳ ತಾಲ್ಲೂಕಿನ ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ವಾಮನಪದವು ಈ ವಿದ್ಯಾರ್ಥಿನಿಲಯ ಕಟ್ಟಡದ ಹೆಚ್ಚುವರಿ ಕಾಮಗಾರಿಯ ವರ್ಕ್‌ಸ್ಲಿಪ್ ಮತ್ತು ಇ.ಐ.ಆರ್.ಎಲ್ ಗೆ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 1339 ಬಿಎಂಎಸ್ 2017 ದಿನಾಂಕ:06.12.2017
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಪ್ರಸ್ತಾವನೆ ಸಂಖ್ಯೆ: ಹಿಂವಕನಿ/ಕನಿಶಾ/ಸಿಆರ್-42/2021-22, ದಿನಾಂಕ:-16.09.2021, ಮತ್ತು 06.01.2022.

------

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಆದೇಶದಲ್ಲಿ ದಕ್ಷಿಣಕನ್ನಡ ಜಿಲ್ಲೆ ಬಂಟ್ವಾಳ ತಾಲ್ಲೂಕಿನ ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ವಾಮನಪದವು ಈ ವಿದ್ಯಾರ್ಥಿನಿಲಯದ ಕಟ್ಟಡ ನಿರ್ಮಾಣವನ್ನು ಕೈಗೊಳ್ಳಲು ರೂ.325.00ಲಕ್ಷಗಳ ಅಂದಾಜು ವೆಚ್ಚಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರಲ್ಲಿ ದಕ್ಷಿಣಕನ್ನಡ ಜಿಲ್ಲೆ ಬಂಟ್ವಾಳ ತಾಲ್ಲೂಕಿನ ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ವಾಮನಪದವು ಈ ವಿದ್ಯಾರ್ಥಿನಿಲಯದ ಕಟ್ಟಡ ಕಾಮಗಾರಿಯು ರೂ.337.62 ಲಕ್ಷಗಳಿಗೆ ಟೆಂಡರ್ ಆಗಿದ್ದು, ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ದಕ್ಷಿಣಕನ್ನಡ ಜಿಲ್ಲೆ ಇವರು ಸೂಚಿಸಿದಂತೆ ಸದರಿ ವಿದ್ಯಾರ್ಥಿನಿಲಯದ ಕಟ್ಟಡದ ಮೇಲ್ಛಾವಣಿಗೆ ಶೀಟು ಅಳವಡಿಕೆ, ಅಡುಗೆ ಕೋಣೆಯಲ್ಲಿ ಗ್ಯಾಸ್ ಸಿಲಿಂಡರ್‌ಗಳಿಗಾಗಿ ಛೇಂಬರ್ ಹಾಗೂ ಪೈಪ್ ಲೈನ್ ಅಳಪಡಿಸುವುದು. ಮೊದಲನೇ ಅಂತಸ್ತಿನಲ್ಲಿ ಬಟ್ಟೆ ಒಗೆಯುವ ಜಾಗದಲ್ಲಿ ಗ್ರಿಲ್ ಹಾಗೂ ಛಾವಣಿ ಅಳವಡಿಕೆ, ಕಟ್ಟಡದ ಆವರಣದಲ್ಲಿ ಇಂಟರ್ ಲಾಕ್ ಪೇವರ್ ಅಳವಡಿಕೆ ಹಾಗೂ ಉಗ್ರಾಣದಲ್ಲಿ ರಾಕ್ ಅಳವಡಿಸುವುದು ಮುಂತಾದ ಅಗತ್ಯ ಹೆಚ್ಚುವರಿ ಕಾಮಗಾರಿಗಳನ್ನು ಕೈಗೊಂಡಿದ್ದು, ಸದರಿ ಹೆಚ್ಚುವರಿ ಕಾಮಗಾರಿಗಳಿಗೆ ತಗುಲಿರುವ ರೂ.42.40 ಲಕ್ಷಗಳ ವರ್ಕ್‌ಸ್ಲಿಪ್ ಮತ್ತು ಇ.ಐ.ಆರ್.ಎಲ್ ಗೆ ಅನುಮೋದನೆ ನೀಡುವಂತೆ ಕೋರಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 618 ಬಿಎಂಎಸ್ 2021, ಬೆಂಗಳೂರು, ದಿನಾಂಕ:- 02.07.2022.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ದಕ್ಷಿಣಕನ್ನಡ ಜಿಲ್ಲೆ ಬಂಟ್ವಾಳ ತಾಲ್ಲೂಕಿನ ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ವಾಮನಪದವು ಈ ವಿದ್ಯಾರ್ಥಿನಿಲಯದ ಕಟ್ಟಡ ನಿರ್ಮಾಣದ ಹೆಚ್ಚುವರಿ ಕಾಮಗಾರಿಗಳಿಗೆ ತಗುಲಿರುವ ರೂ.42.40 (ನಲವತ್ತೆರಡು ಲಕ್ಷ ನಲವತ್ತು ಸಾವಿರ ರೂಪಾಯಿಗಳು ಮಾತ್ರ) ಲಕ್ಷಗಳ ವರ್ಕ್‌ಸ್ಲಿಪ್ ಮತ್ತು ಇ.ಐ.ಆರ್.ಎಲ್ ಗೆ ಅನುಮೋದನೆ ನೀಡಿ ಆದೇಶಿಸಿದೆ.

2/7/22

ಈ ವೆಚ್ಚವನ್ನು 2022-23ನೇ ಸಾಲಿನಲ್ಲಿ ರಾಜ್ಯ ವಲಯ ಲೆಕ್ಕಶೀರ್ಷಿಕೆ: 4225-03-277-2-06 ಅಬ್ಜೆಕ್ಟೀವ್ ಕೋಡ್ 386 ರಡಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಮಾನ್ಯ ಇಲಾಖಾ ಸಚಿವರ ಅನುಮೋದನೆಯೊಂದಿಗೆ ಹಾಗೂ ಇಲಾಖಾ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

Shaheenparveen 02/07/2022

**(ಷಾಹೀನ್ ಪರ್ವೀನ್.ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ದಕ್ಷಿಣಕನ್ನಡ ಜಿಲ್ಲೆ
4. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು, ದಕ್ಷಿಣಕನ್ನಡ ಜಿಲ್ಲೆ.
5. ಖಜನಾಧಿಕಾರಿಗಳು, ರಾಜ್ಯ ಹುಜುರ್ ಖಜಾನೆ, ಬೆಂಗಳೂರು.

<u>ಪ್ರತಿ ಮಾಹಿತಿಗಾಗಿ:-</u>

1. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

***********